# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಕರ್ನಾಟಕ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/- ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು

**ಓದಲಾಗಿದೆ**: ಸರ್ಕಾರದ ಆದೇಶ ಸಂ: ಮಮಇ 70 ಎಸ್‌ಡಬ್ಲ್ಯೂಡಬ್ಲ್ಯೂ 2023, ದಿನಾಂಕ 20-5-2023

**ಪ್ರಸ್ತಾವನೆ:**

ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ. ಕುಟುಂಬದ ನಿರ್ವಹಣೆಯಲ್ಲಿ ಕುಟುಂಬ ಯಜಮಾನಿಯ ಪಾತ್ರ ಪ್ರಮುಖವಾಗಿದ್ದು, ಯಜಮಾನಿಯು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬ ನಿರ್ವಹಣೆಯು ಉತ್ತಮ ಗುಣಮಟ್ಟದಲ್ಲಿರುತ್ತದೆ. ಆದ್ದರಿಂದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ ಯೋಜನೆ"ಯನ್ನು ಜಾರಿಗೆ ತರಲು ಪ್ರಸ್ತಾಪಿಸಲಾಗಿದೆ.

ಮೇಲೆ ಓದಲಾದ ಸರ್ಕಾರದ ದಿನಾಂಕ 20-5-2023ರ ಆದೇಶದಲ್ಲಿ, ದಿನಾಂಕ 20-5-2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನೀಡಿದ ತಾತ್ವಿಕ ಅನುಮೋದನೆ ಮೇರೆಗೆ, ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ ಯೋಜನೆ"ಯನ್ನು ಜಾರಿಗೆ ತರಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ ಹಾಗೂ ಈ ಯೋಜನೆಯ ವಿವರವಾದ ರೂಪುರೇಷೆ ಹಾಗೂ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದೆಂದು ತಿಳಿಸಲಾಗಿದೆ.

ಅದರಂತೆ ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಗಳೊಂದಿಗೆ ಸಮಾಲೋಚಿಸಿ ಸಚಿವ ಸಂಪುಟದ ಅನುಮೋದನೆ ಪಡೆದು, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ: ಮಮಇ 70 ಮಮಅ 2023, ಬೆಂಗಳೂರು, ದಿನಾಂಕ 6ನೇ ಜೂನ್ 2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/- ಗಳನ್ನು (ಎರಡು ಸಾವಿರ ರೂಪಾಯಿಗಳು ಮಾತ್ರ) ನೀಡುವ "ಗೃಹ ಲಕ್ಷ್ಮಿ" ಯೋಜನೆಯನ್ನು 2023-24ನೇ ಸಾಲಿನಲ್ಲಿ ಈ ಕೆಳಕಂಡಂತೆ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ;

1. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.

2. ಒಂದೇ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಹಿಳೆಯರಿದ್ದಲ್ಲಿ, ಒಂದು ಮಹಿಳೆಗೆ ಮಾತ್ರ ಯೋಜನೆ ಅನ್ವಯಿಸತಕ್ಕದ್ದು

3. ಈ ಯೋಜನೆಯ ಫಲಾನುಭವಿಗಳು 2023ರ ಜೂನ್ 15 ರಿಂದ ಜುಲೈ 15 ರವರೆಗೆ ಅರ್ಜಿ ಸಲ್ಲಿಸುವುದು. ನಂತರ ಜುಲೈ 15 ರಿಂದ ಫಲಾನುಭವಿಗಳ ಆಯ್ಕೆ ಮಾಡುವುದು. ಆಯ್ಕೆಗೊಂಡ ಫಲಾನುಭವಿಗಳಿಗೆ ಆಗಸ್ಟ 15 ರಂದು ಅವರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡುವುದು

4. ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಮೂಲಕವಾಗಲೀ ಅಥವಾ ಭೌತಿಕವಾಗಿಯಾಗಲೀ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸತಕ್ಕದ್ದು

5. ಅರ್ಜಿದಾರರು ಸಲ್ಲಿಸುವ ಪೂರ್ಣ ಪ್ರಮಾಣದ ಅರ್ಜಿಯಲ್ಲಿನ ಸ್ವಯಂ ಘೋಷಣೆ ಆಧಾರದ ಮೇಲೆ ಮಂಜೂರಾತಿ ನೀಡುವುದು. ಅರ್ಜಿಯಲ್ಲಿನ ಅಂಶಗಳ ಬಗ್ಗೆ ತದನಂತರ ಪರಿಶೀಲನೆ ಮಾಡುವುದು. ತಪ್ಪು ಮಾಹಿತಿ ನೀಡಿ ಸೌಲಭ್ಯ ಪಡೆದಿರುವುದು ಕಂಡುಬಂದಲ್ಲಿ, ಈಗಾಗಲೇ ಪಾವತಿಸಲಾಗಿರುವ ಹಣವನ್ನು ಅರ್ಜಿದಾರರಿಂದ ವಸೂಲು ಮಾಡುವುದು ಮತ್ತು ಅಂತಹವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವುದು;

6. ಈ ಯೋಜನೆಯ ಸೌಲಭ್ಯ ಪಡೆಯಲು ಫಲಾನುಭವಿಯ ಬ್ಯಾಂಕ್ ಖಾತೆ ಮತ್ತು ಆಧಾರ ಕಾರ್ಡ್ ಗಳನ್ನು ಜೋಡಣೆ ಮಾಡುವುದು

7. ಈ ಕೆಳಕಂಡ ಮಾನದಂಡಗಳನ್ನು ಹೊಂದಿರುವವರು ಈ ಯೋಜನೆಗೆ ಅರ್ಹರಾಗಿರುವುದಿಲ್ಲ;
   i. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ
   ii. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ

ಈ ಆದೇಶವನ್ನು ಸಚಿವ ಸಂಪುಟವು ಪ್ರಕರಣ ಸಂಖ್ಯೆ 322/2023 ರಲ್ಲಿ ದಿನಾಂಕ 02-06-2023 ರಂದು ನೀಡಿರುವ ಅನುಮೋದನೆ ಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

N. S. Khatavkar
06/06/2023
(ನಿರ್ಮಲಾ ಎಸ್. ಖಟಾವ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಅಂಚೆ ಪೆಟ್ಟಿಗೆ:5398, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಬೆಂಗಳೂರು

5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿಮತ್ತು ಪಂಚಾಯತ್ ರಾಜ ಇಲಾಖೆ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು
9. ಸರ್ಕಾರದ ಕಾರ್ಯದರ್ಶಿ, ಇ-ಆಡಳಿತ ಇಲಾಖೆ, ಬೆಂಗಳೂರು
10. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
11. ನಿರ್ದೇಶಕರು, ಪಿಎಂಐ ವಿಭಾಗ, ಯೋಜನಾ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆ, ಬೆಂಗಳೂರು
12. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ಬೆಂಗಳೂರು (ಸಚಿವ ಸಂಪುಟ ವಿಷಯ ಸಂ: 322/2023 ದಿನಾಂಕ 2-6-2023)
13. ಜಂಟಿ ನಿರ್ದೇಶಕರು, ಐಸಿಡಿಎಸ್/ ಪಿಡಿಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
14. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾಪಂಚಾಯತ್/ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ/ ಜಿಲ್ಲಾ ನಿರೂಪಣಾಧಿಕಾರಿಗಳು/ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು
15. ಎಲ್ಲಾ ತಾಲ್ಲೂಕು ತಹಸೀಲ್ದಾರರರುಗಳು /ಉಪ ತಹಸೀಲ್ದಾರರುಗಳು
16. ಸರ್ಕಾರದ ಅಧೀನ ಕಾರ್ಯದರ್ಶಿ, ಅರ್ಥಿಕ ಇಲಾಖೆ (ವೆಚ್ಚ-10), ಬೆಂಗಳೂರು
17. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು
18. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
19. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು